ಮುಂಗಾರು ಹಂಗಾಮಿನಲ್ಲಿ ಕೃಷಿ ಪ್ರದೇಶದಲ್ಲಿ ಬಿತ್ತನೆ ಕುರಿತು.

5346 (5748); ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ)

ಅ) ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಿಂದ ಕೃಷಿ ಪ್ರದೇಶ ಎಷ್ಟು;

ಆ) ಬಿತ್ತನೆಯಾಗದೇ ಉಳಿದಿರುವ ಕೃಷಿ ಯೋಗ್ಯವಾದ ಪ್ರದೇಶ ಎಷ್ಟು;

ಇ) ಬಿತ್ತನೆಯಾಗಿ ಬೆಳೆ ವಿಫಲವಾದ ಕೃಷಿ ಪ್ರದೇಶ ಎಷ್ಟು;

ಈ) ಬಿತ್ತನೆಯಾಗದೇ ಮತ್ತು ಬಿತ್ತನೆಯಾಗಿ ಬೆಳೆ ನಷ್ಟಕ್ಕೊಳಗಾದ ರೈತರಿಗೆ ಪರಿಹಾರ ನೀಡಲು ಸರ್ಕಾರ ಸಿದ್ದವಿದೆಯೇ;

ಉ) ಇದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಕೃಷ್ಣ ಭೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ 2015ರ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಕೃಷಿ ಪ್ರದೇಶ 64.00 ಲಕ್ಷ ಹೆಕ್ಟೇರ್.

ಆ) ರಾಜ್ಯದಲ್ಲಿ 2015ರ ಮುಂಗಾರು ಹಂಗಾಮಿನಲ್ಲಿ ಕೃಷಿ ಬೆಳೆಗಳನ್ನು 73 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ಬೆಳೆಯಲು ಬಿತ್ತನೆ ಗುರಿಯನ್ನು ಹಮ್ಮಿಕೊಳ್ಳಲಾಗಿತ್ತು. ಮಳೆಯ ಅಭಾವ ಹಾಗೂ ವಿವಿಧ ಜಲಾಶಯಗಳಲ್ಲಿ ಕಡಿಮೆ ನೀರಿನ ಸಂಗ್ರಹಣೆಯ ಕಾರಣ ಕೃಷಿ ಬೆಳೆಗಳ ಬಿತ್ತನೆ ಕುಂಠಿತಗೊಂಡು 64.00 ಲಕ್ಷ ಹೆಕ್ಟೇರ್ ಪ್ರಗತಿಯಾಗಿರುತ್ತದೆ. ಉಳಿದ 9 ಲಕ್ಷ ಹೆಕ್ಟೇರ್ ಬಿತ್ತನೆಯಾಗದೆ ಉಳಿದಿರುತ್ತದೆ.

ಇ) 2015ರ ಮುಂಗಾರು ಹಂಗಾಮಿನಲ್ಲಿ ಮಳೆಯ ಅಭಾವದಿಂದ ರಾಜ್ಯದಲ್ಲಿ ಸುಮಾರು 33.00 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ವಿವಿಧ ಕೃಷಿ ಬೆಳೆಗಳು ತೇವಾಂಶದ ಕೊರತೆಗೆ ಒಳಪಟ್ಟಿದ್ದು ಸುಮಾರು 28.88 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ಬೆಳೆಗಳ ಇಳುವರಿಯಲ್ಲಿ ಶೇಕಡಾ 33

ಕ್ಕಿಂತ ಹೆಚ್ಚು ನಷ್ಟ ಆಗಬಹುದೆಂದು ಕೃಷಿ ಹಾಗೂ ಕಂದಾಯ ಇಲಾಖೆಯ ಜಂಟಿ ಸಮೀಕ್ಷೆ ಮೂಲಕ ಅಂದಾಜಿಸಲಾಗಿದೆ.

ಈ) ಬಿತ್ತನೆಯಾಗಿ ಬೆಳೆ ನಷ್ಟಕ್ಕೊಳಗಾದ ರೈತರಿಗೆ "ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ (ಎನ್.ಡಿ.ಆರ್.ಎಫ್)" ಯಡಿಯಲ್ಲಿ ಪರಿಹಾರ ನೀಡುವ ಸಲುವಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಅನುದಾನ ಬಂದ ನಂತರ ಪರಿಹಾರ ವಿತರಿಸಲು ಕ್ರಮ ಕೈಗೊಳ್ಳಲಾಗುವುದು. ಬಿತ್ತನೆಯಾಗದ ಪ್ರದೇಶದ ರೈತರಿಗೆ ಪರಿಹಾರ ನೀಡಲು ಅವಕಾಶವಿರುವುದಿಲ್ಲ.

ಉ) ಬೆಳೆ ನಷ್ಟಕ್ಕೊಳಗಾದ ರೈತರಿಗೆ ಪರಿಹಾರ ನೀಡಲು ಸರ್ಕಾರ ಕೃಷಿ ತೋಟಗಾರಿಕೆ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಜಂಟಿ ತಂಡಗಳನ್ನು ರಚಿಸಿ ಸಮೀಕ್ಷೆಯ ಮೂಲಕ ರೈತರ ವಿವರಗಳನ್ನು ಸಂಗ್ರಹಿಸಲಾಗಿದೆ. ಪರಿಹಾರದ ಮೊತ್ತವನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದು.

ಮೇಲ್ದರ್ಜೆಗೇರಿಸುವುದರಿಂದ ಬರುವ ಅನುದಾನ

5348 (5431); ಶ್ರೀ ಗುರು ಪಾಟೀಲ್ ಶಿರವಾಳ (ಶಹಾಪುರ)

ಅ) ಯಾದಗಿರಿ ಜಿಲ್ಲೆಯ ಶಹಪೂರ ಮತಕ್ಷೇತ್ರದ ಕೆಂಭಾವಿ ಪಟ್ಟಣವನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಪುರಸಭೆಗೆ ಸರ್ಕಾರದಿಂದ ವಿಶೇಷ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಈ ಪುರಸಭೆಯ ವ್ಯಾಪ್ತಿಯ ಜನರಿಗೆ ಮೂಲಭೂತ ಸೌಕರ್ಯ ಒದಗಿಸಲು ಪ್ರಸ್ತುತ ವರ್ಷ ಯಾವ ಕ್ರಿಯಾ ಯೋಜನೆ ರೂಪಿಸಲಾಗಿದೆ;